## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

## ಸಿಸಿ ನಂ. **344/2019**

ಚಾಸಾ-2 ಪ್ರಾಸಾ-4

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 13-10-2025

| | | |
|---|---|---|
| ಹೆಸರು | : | ಯಲ್ಲಪ್ಪ |
| ತಂದೆಯ ಹೆಸರು | : | ನಿಂಗಪ್ಪ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸಸ್ಥಳ | : | ದೇವಲ ಗಾಣಗಾಪುರ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಚಾಸಾ 3 ಪರಿಚಯ ಇರುತ್ತಾರೆ.

ಸಾಕ್ಷಿಗೆ ಜಪ್ತಿ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಜಪ್ತಿ ಪಂಚನಾಮೆಯನ್ನು ಈಗಾಗಲೇ ನಿಪಿ-**1** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಸಿ) ಎಂದು ಗುರುತಿಸಲಾಯಿತು.

ನಾನು ಈ ಸಹಿಯನ್ನು ನನ್ನ ಅಂಗಡಿಯಲ್ಲಿ ಕುಳಿತಿದ್ದಾಗ ಪೋಲಿಸರು ಬಂದು ಸಹಿ ಮಾಡು ಅಂತ ಹೇಳಿದರಿಂದ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಜಪ್ತಿ ಪಂಚನಾಮೆ ಮಾಡಿಲ್ಲ. ನನಗೆ ಈ ಪ್ರಕರಣ ಕುರಿತು ಯಾವುದೇ ಮಾಹಿತಿ ಇಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

ಪಾಟೀ ಸವಾಲುಃ ಸ.ಸ.ಅ. ರವರಿಂದ

ದಿಃ 12-04-2019 ರಂದು ರಾತ್ರಿ 8-15 ಕ್ಕೆ ಚಾಸಾ 1 ರವರು ನನಗೆ ಠಾಣೆಗೆ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ತದನಂತರ ತಮಗೆ ಬಂದ ಮಾಹಿತಿಯನ್ನು ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ಚಾಸಾ 3 ರವರು ಮಾಹಿತಿ ಬಂದ ಸ್ಥಳಕ್ಕೆ ಹೋಗಿರುತ್ತೇವೆ ಎಂದರೆ ಸರಿಯಲ್ಲ. ನನ್ನ ಹಾಗೂ ಚಾಸಾ 3 ರವರ ಸಮಕ್ಷಮ ಆರೋಪಿತನ ಮೇಲೆ ದಾಳಿ ಮಾಡಿ ಆರೋಪಿ ಬಳಿ ಇದ್ದ 34 ಟೆಟ್ರಾ ಪ್ಯಾಕೆಟುಗಳನ್ನು ಜಪ್ತಿ ಪಡಿಸಿಕೊಂಡು ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ಶ್ರೀ **SJG** ಪರವಾಗಿ **RMS** ವಕೀಲರಿಂದಃ-

ಪಾಟೀಸವಾಲು ಇಲ್ಲ ಎಂದು ನುಡಿಯುತ್ತಾರೆ.

ಮರು ವಿಚಾರಣೆಃ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ